<u>ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ,</u>

<u>ಹಗರಿಬೊಮ್ಮನಹಳ್ಳಿ</u>

ಸಿ ಸಿ ನಂ. 474/2024

<u>ಸಾಕ್ಷಿಗೆ ದಿನಾಂಕ 06-03-2026 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

C.W.: 2 P.W.: 1

| | | |
|---|---|---|
| ಹೆಸರು | : | ಸಿ ಮಂಜುನಾಥ |
| ತಂದೆಯ ಹೆಸರು | : | ರಾಮಣ್ಣ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಇಟಗಿ ಗ್ರಾಮ |

<u>ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-</u>

ಆರೋಪಿಯನ್ನು ನಾನು ನೋಡಿಲ್ಲ, ಅವನು ಯಾವ ಕಾರಣಕ್ಕಾಗಿ ನ್ಯಾಯಾಲಯಕ್ಕೆ ಬಂದಿದ್ದಾನೆ ಅವನ ಮೇಲೆ ಏನು ಪ್ರಕರಣ ಇದೆ ಎಂದು ನನಗೆ ಗೊತ್ತಿಲ್ಲ, ಸಾಕ್ಷಿಗೆ ಜಪ್ತುಪಂಚನಾಮೆ ಮತ್ತು ನಕಾಶೆಯನ್ನು ತೋರಿಸಲಾಗಿ ಅವುಗಳಲ್ಲಿ ತನ್ನ ಸಹಿ ಇವೆ ಅಂತಾ ನೋಡಿ ಗುರುತಿಸಿದ್ದು ಸದರಿ ದಾಖಲೆಗಳನ್ನು ಕ್ರಮವಾಗಿ ನಿಪಿ-1 ಮತ್ತು 2 ಎಂದು ಮತ್ತು ಅವುಗಳ ಮೇಲಿರುವ ಸಾಕ್ಷಿಯ ಸಹಿಗಳನ್ನು ನಿಪಿ-1ಎ ಮತ್ತು 2ಎ ಎಂದು ಗುರುತಿಸಲಾಯಿತು. ಸದರಿ ದಾಖಲೆಗಳಿಗೆ ಈಗ 1 ವರ್ಷದ ಹಿಂದೆ ಇಟಗಿ ಪೋಲೀಸ್ ಠಾಣೆಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ. ನನ್ನ ಜೊತೆ ಚಾಸಾ-3 ರವರು ಸಹಾ ಸದರಿ ದಾಖಲೆಗೆ ಸಹಿ ಮಾಡಿರುತ್ತಾರೆ. ಸದರಿ ದಾಖಲೆಗಳಲ್ಲಿ ಏನು ಬರೆದಿರುತ್ತಾರೆನ್ನುವುದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಆರೋಪಿಯಿಂದ ಯಾವುದೇ ಮಧ್ಯವನ್ನು ಅಮಾನತುಪಡಿಸಿಕೊಂಡಿಲ್ಲ ಆರೋಪಿಯನ್ನು ಬಂಧಿಸಿಲ್ಲ, ಯಾವುದೇ ಪಂಚನಾಮೆ ಜರುಗಿಸಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ಮು ಮಾಲುಗಳ ಚೀಲದ ಮೇಲೆ ಅಂಟಿಸಿರುವ ಚೀಟಿಯಲಿಲ ನನ್ನ ಸಹಿ ಇದೆ ಆದರೆ ಸದರಿ ಚೀಲದಲ್ಲಿ ಏನಿದೆ ಎಂದು ನನಗೆ ಗೊತ್ತಿಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-</u>

ದಿಃ31-03-2024 ರಂದು ಮದ್ಯಾಹ್ನ 2.55 ರಿಂದ 3.55 ರವರೆಗೆ ಇಟಗಿ ಪೋಲೀಸರು ಘಟನಾ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಜರುಗಿಸಿ

ನಿಪಿ-2 ರಂತೆ ನಕಾಶೆಯನ್ನು ತಯಾರಿಸಿ ಆರೋಪಿಯಿಂದ 90 ಮಿಲಿಯ ಓ ಸಿ ಕಂಪನಿಯ 255 ಟೆಟ್ರಾ ಪೌಚು, 500 ಮಿಲಿಯ ಆರ್ ಸಿ ಸ್ಟ್ರಾಂಗ್ ಬಿಯರಿನ 17 ಟಿನ್‌ಗಳನ್ನು ಅಮಾನತ್ತುಪಡಿಸಿಕೊಂಡು ಸೀಲ್ ಮಾಡಿರುತ್ತಾರೆಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ನಾನು ನಿಪಿ-1 ಮತ್ತು 2 ರಲ್ಲಿರುವ ವಿಚಾರ ತಿಳಿದುಕೊಂಡು ಸದರಿ ದಾಖಲೆಗಳಿಗೆ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ</u>

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ